# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 794 |
| ಸದಸ್ಯರ ಹೆಸರು | : | ಶ್ರೀ ಮಧು.ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 26-12-2022 |
| ಉತ್ತರಿಸುವ ಸಚಿವರು | : | ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಶ್ವಕವಿ ಶ್ರೀ ಕುವೆಂಪು ಚಿತಾಭಸ್ಮ ಸ್ಮಾರಕ ಭವನ ನಿರ್ಮಾಣಕ್ಕೆ ಶ್ರೀ ರಾಮಕೃಷ್ಣ ಸೇವಾ ಕೇಂದ್ರ ಟ್ರಸ್ಟ್, ಯಾಚೇನಹಳ್ಳಿ, ತೀ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರಿಗೆ ಮಂಜೂರು ಆಗಿದ್ದ ರೂ.85 ಲಕ್ಷಗಳ ಅನುದಾನ ಇದುವರೆವಿಗೂ ಬಿಡುಗಡೆ ಆಗದಿರಲು ಕಾರಣಗಳೇನು; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ:ಕಸಂವಾ/164/ ಕಸಧ/ 2019, ದಿನಾಂಕ:13.11.2019 ರಲ್ಲಿ ವಿಶ್ವಕವಿ ಶ್ರೀ ಕುವೆಂಪು ಚಿತಾಭಸ್ಮ ಸ್ಮಾರಕ ಭವನ ನಿರ್ಮಾಣಕ್ಕಾಗಿ ರೂ.85.00 ಲಕ್ಷಗಳನ್ನು ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ ಇವರಿಗೆ ಬಿಡುಗಡೆ ಮಾಡಲು ಆದೇಶಿಸಲಾಗಿರುತ್ತದೆ. ಆದರೆ, ಕೋವಿಡ್-19 ರಿಂದ ಉಂಟಾದ ಆರ್ಥಿಕ ಮುಗ್ಗಟ್ಟು ಹಾಗೂ ಅನುದಾನದ ಕೊರತೆಯಿಂದ ರೂ.85.00 ಲಕ್ಷವನ್ನು ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ ಇವರ ಡಿಡಿಓ ಕೋಡ್‌ಗೆ ಗಣಕೀಕರಣ ಮಾಡಲು ಸಾಧ್ಯವಾಗಿರುವುದಿಲ್ಲ. |
| ಆ) | ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ, ಇವರು ರೂ.85 ಲಕ್ಷಗಳನ್ನು ಬಿಡುಗಡೆ ಮಾಡಲು ಆದೇಶವನ್ನು ನವೀಕರಿಸಿ, ಆದೇಶ ಹೊರಡಿಸುವಂತೆ ಕೋರಿ ಸಲ್ಲಿಸಲಾಗಿರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | • ಹೌದು.<br>• ಅನುದಾನ ಬಿಡುಗಡೆಗಾಗಿ ಕೋರಿರುವ ಪ್ರಸ್ತಾವನೆಯನ್ನು ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ. |
| ಇ) | ಪ್ರಸ್ತಾವನೆ ಸಲ್ಲಿಸದಿದ್ದಲ್ಲಿ, ಅನುದಾನ ವನ್ನು ಯಾವ ಕಾಲಮಿತಿ ಯೊಳಗೆ ಬಿಡುಗಡೆ ಮಾಡಲಾಗುವುದು (ವಿವರ ನೀಡುವುದು) | ಪ್ರಸಕ್ತ ಸಾಲಿನ ಅನುದಾನ ಲಭ್ಯತೆಯನ್ನಾಧರಿಸಿ ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ: ಕಸಂವಾ 108 ಕವಿಸ 2022**

(ವಿ. ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.